SC No.71/2022
CW-06 / PW-04

## ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು

## ಸತ್ರ ಮೊಕದ್ದಮೆ ಸಂಖ್ಯೆ 71/2022

ಚಾ.ಸಾಃ 06 ಪ್ರಾ.ಸಾಃ 04

ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ 10.07.2025

| | | |
|---|---|---|
| ಸಾಕ್ಷಿಯ ಹೆಸರು | : | ಅರ್ಬಾಸ್ |
| ತಂದೆಯ ಹೆಸರು | : | ಸೈಯದ್ ಖಾಜಾ ಅಬ್ಬಾಸ್ |
| ವಯಸ್ಸು | : | 27 ವರ್ಷ |
| ಉದ್ಯೋಗ | : | ಮೇಕಾನಿಕ್ |
| ವಿಳಾಸ | : | ಮಾನ್ವಿ |

**ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ**

ನ್ಯಾಯಾಲಯದಲ್ಲಿರುವ ಆರೋಪಿತರು ನನಗೆ ಗೊತ್ತಿಲ್ಲ. 7 ಮತ್ತು 8 ನೇ ಆರೋಪಿತರು ಏನನ್ನೂ ತೋರಿಸಿಲ್ಲ ಮತ್ತು ಪೋಲಿಸರು ನನ್ನ ಸಮಕ್ಷಮ ಮಹಜರಗಳನ್ನು ಮಾಡಿಲ್ಲ ಮತ್ತು ಯಾವುದೇ ಸ್ಥಳ ತೋರಿಸಿಲ್ಲ. ಸಾಕ್ಷಿಯು ಗುರುತಿಸಿದ ಸ್ಥಳ ಮಹಜರನ್ನು **ನಿಪಿ.7** ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು **ನಿಪಿ.7(ಎ)** ಎಂದು ಗುರುತಿಸಲಾಯಿತು.

02. ಸಾಕ್ಷಿಯು ಗುರುತಿಸಿದ ಪೋಟೋವನ್ನು **ನಿಪಿ.7(ಬಿ) ಎಂದು ಸರ್ಟಿಫಿಕೇಟ್ ಹಾಜರು ಪಡಿಸುವ ಷರತ್ತಿನೊಂದಿಗೆ** ಗುರುತಿಸಲಾಯಿತು. ಪೊಟೋವನ್ನು ಯಾವ ಕಾರಣಕ್ಕಾಗಿ ತೆಗೆದಿದ್ದಾರೆಂದು ನನಗೆ ಗೊತ್ತಿಲ್ಲ. ನಿಪಿ.7 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿಸಲಾಯಿತು)

**ಮಾನ್ಯ ಸರಕಾರಿ ಅಭಿಯೋಜಕರಿಂದ ಪಾಟೀ ಸವಾಲುಃ-**

03. ದಿನಾಂಕ 15.06.2021 ರಂದು ನನ್ನ ಮತ್ತು ಚಾಸಾ-7 ರವರ ಸಮಕ್ಷಮ 7, 8 ನೇ ಆರೋಪಿತರು ಅಕ್ರಮವಾಗಿ ಸ್ಪೋಟಕ ವಸ್ತುಗಳನ್ನು ಸಂಗ್ರಹಿಸಿದ ಸ್ಥಳವನ್ನು ತೋರಿಸಿದರು ಎನ್ನುವುದು ಸುಳ್ಳು. ಸ್ಥಳದಲ್ಲಿ ಪೋಲಿಸರು ನಿಪಿ.7 ರ ಪ್ರಕಾರ ಮಹಜರ ಮಾಡಿದರು ಎನ್ನುವುದು ಸುಳ್ಳು. ಸ್ಥಳದಲ್ಲಿ ಪೋಲಿಸರು ಪೋಟೋ ತೆಗೆದರು ಎನ್ನುವುದು ಸುಳ್ಳು.

04. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೆನೆ ಎನ್ನುವುದು ಸರಿಯಲ್ಲ.

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ.ಇದೆ.

**(ಹತ್ತಿಕಾಳ ಪ್ರಭು ಸಿದ್ದಪ್ಪ)**
ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಯಚೂರು.